(ಇಂದು ದಿನಾಂಕಃ **10-01-2025** ರಂದು ಸಾಕ್ಷಿಯನ್ನು ತೆರೆದ ನ್ಯಾಯಾಲಯಕ್ಕೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.)

**ಪಾಟೀ ಸವಾಲು ಶ್ರೀಮತಿ ಪಿ ಸಿ ಎಚ್ ವಕೀಲರಿಂದಃ**

ನಾನು ಪಿ ಯು ಸಿ ವ್ಯಾಸಾಂಗ ಮಾಡಿರುತ್ತೇನೆ. ನನಗೆ ಓದಲು ಬರೆಯಲು ಬರುತ್ತದೆ. ನನ್ನ ಮುಖ್ಯ ವಿಚಾರಣೆಗೆ ನಾನೇ ಮಾಹಿತಿ ನೀಡಿರುತ್ತೇನೆ. ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದ ವಿಷಯಗಳ ಕುರಿತು ನನಗೆ ಸಂಪೂರ್ಣ ಮಾಹಿತಿ ಇರುತ್ತದೆ. ನಾನು ಒಕ್ಕಲುತನ ಕೆಲಸ ಮಾಡುತ್ತೇನೆ. ನನ್ನ ಹೆಸರಿನಲ್ಲಿ ದಾವಾ ಆಸ್ತಿ ಹೊರತು ಪಡಿಸಿ ಸರ್ವೇ ನಂಃ 76/4 ಎ/1 ನನ್ನ ಹೆಸರಿನಲ್ಲಿರುತ್ತದೆ ಎಂದರೆ ಸರಿ. ಸಾಕ್ಷಿಯು ಪಹಣಿ ಪತ್ರಿಕೆಯನ್ನು ನೋಡಿ ಒಪ್ಪಿಕೊಂಡಿದ್ದರ ಕಾರಣ ಅದನ್ನು **ನಿಡಿ-1** ಎಂದು ಗುರುತಿಸಲಾಯಿತು. ಸದರಿ ಜಮೀನು ಒಟ್ಟು ಕುಟುಂಬದಿಂದ ಬಂದ ಆದಾಯದಿಂದ ಖರೀದಿಸಿದ ಆಸ್ತಿಯಾಗಿರುತ್ತದೆ ಎಂದರೆ ಸರಿಯಲ್ಲ. ಸದರಿ ಅಂಶವನ್ನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಸದರಿ ಜಮೀನನ್ನು 2010 ರಲ್ಲಿ ಖರೀದಿಸಿರುತ್ತೇನೆ. ಸದರಿ ಜಮೀನಿನ ಖರೀದಿಯ ವಿಷಯ ನನ್ನ ತಾಯಿ ಹಾಗೂ ಅಣ್ಣನಿಗೆ ಗೊತ್ತಿತ್ತು. ದಾವಾ ಜಮೀನನ್ನು ಹೊರತು ಪಡಿಸಿ ನಮ್ಮ ಕುಟುಂಬಕ್ಕೆ ಸರ್ವೇ ನಂಃ 1118/5 ಇದೆ ಎಂದರೆ ಸರಿ. ಸಾಕ್ಷಿಯು ಪಹಣಿ ಪತ್ರಿಕೆಯನ್ನು ನೋಡಿ ಒಪ್ಪಿಕೊಂಡಿದ್ದರ ಕಾರಣ ಅದನ್ನು **ನಿಡಿ-2** ಎಂದು ಗುರುತಿಸಲಾಯಿತು. ಸದರಿ ಪಹಣಿಯಲ್ಲಿರುವ ಅಮೃತಪ್ಪನವರು ನನ್ನ ಅಜ್ಜನ ತಂದೆಯಾಗಿರುತ್ತಾರೆ. ಸದರಿ ಜಮೀನಿನಲ್ಲಿ ನಾನು ಯಾವುದೇ ರೀತಿಯ ಬೆಳೆ ಬೆಳೆಯುತ್ತಿಲ್ಲ ಹಾಗೂ ಅದು ಪ್ರತಿವಾದಿ ಅದರ ಸಾಗುವಳಿ ಮಾಡುತ್ತಾರೆ ಎಂದು ನುಡಿದಿರುತ್ತಾರೆ. ಸದರಿ ಅಂಶವನ್ನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ಜಮೀನಿನಲ್ಲಿ ನನಗೂ ಸಹ ಪಾಲು ಇದೆ ಎಂದರೆ ಸರಿ. ಸದರಿ ಜಮೀನನ್ನು ಪ್ರಸ್ತುತ ದಾವೆಯಲ್ಲಿ ಸೇರ್ಪಡೆ ಮಾಡಿರುವುದಿಲ್ಲ. ಸದರಿ ಜಮೀನನ್ನು ದಾವೆಯಲ್ಲಿ ಸೇರ್ಪಡೆ ಮಾಡಲು ನನಗೇನು ತೊಂದರೆ ಇರಲಿಲ್ಲ. ನಾನು ಈಗ ನನ್ನ ತಾಯಿಯ ತವರು ಮನೆ ಅಣ್ಣಿಗೇರಿಯಲ್ಲಿ ವಾಸವಿದ್ದೇನೆ. ಪ್ರತಿವಾದಿ ನಿವೇಶನ ಸಂಃ79 ರಲ್ಲಿ ವಾಸವಿದ್ದಾರೆ. ನಾನು ಹಾಗೂ ಪ್ರತಿವಾದಿ 1998 ರಿಂದ ಪ್ರತ್ಯೇಕವಾಗಿ ವಾಸವಿದ್ದೇವೆ. ನನ್ನ ತಾಯಿ ದೇವಕ್ಕರವರು ಪ್ರತಿವಾದಿಯ ಬಳಿ ಇದ್ದರು ಎಂದರೆ ಸಾಕ್ಷಿಯು ನನ್ನ ಬಳಿ ಇದ್ದರು ಎಂದು ನುಡಿದಿರುತ್ತಾರೆ. ಸದರಿ ಅಂಶವನ್ನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ತಾಯಿಗೆ ಅನರೋಗ್ಯವಾಗಿದ್ದು ಅವರನ್ನು ಪ್ರತಿವಾದಿಯೇ ನೋಡಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿವೇಶನ ಸಂಃ 78 ಸರ್ಕಾರದಿಂದ ನನ್ನ ತಾಯಿಗೆ ಮಂಜೂರಾಗಿರುತ್ತದೆ ಎಂದರೆ ಸರಿ. ಪ್ರತಿವಾದಿ ನನ್ನ ತಾಯಿಯನ್ನು ನೋಡಿಕೊಂಡಿದ್ದರಿಂದ ನನ್ನ ತಾಯಿ ಪ್ರತಿವಾದಿಯ ಹೆಸರಿನಲ್ಲಿ ದಿನಾಂಕಃ 07-09-2012 ರಂದು ಮೃತ್ಯು ಪತ್ರವನ್ನು ಮಾಡಿರುತ್ತಾರೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ಅದನ್ನು ಬಲವಂತವಾಗಿ

ಮಾಡಿಕೊಂಡಿರುತ್ತಾನೆ ಎಂದು ನುಡಿದಿರುತ್ತಾರೆ. ಸದರಿ ಅಂಶವನ್ನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ತಾಯಿಗೆ ಅನರೋಗ್ಯವಾದ ಬಳಿಕ ನನಗೆ ಮೃತ್ಯು ಪತ್ರದ ಬಗ್ಗೆ ಗೊತ್ತಾಗಿರುತ್ತದೆ. ನನ್ನ ತಾಯಿ ಅಗಸ್ಟ-2015 ರಲ್ಲಿ ಮೃತ ಪಟ್ಟಿರುತ್ತಾರೆ. ಪ್ರತಿವಾದಿ ಮೃತ್ಯು ಪತ್ರದ ಪ್ರಕಾರ ಆಸ್ತಿಯನ್ನು ತನ್ನ ಹೆಸರಿಗೆ ಮಾಡಿಕೊಂಡಿದ್ದನ್ನು ಪ್ರಶ್ನಿಸಿ ನಾನು ಮೇಲ್ಮನವಿ ಸಲ್ಲಿಸಿರುವುದಿಲ್ಲ. ಪ್ರತಿವಾದಿ ತನಗೆ ಮೃತ್ಯು ಪತ್ರದ ಪ್ರಕಾರ ಬಂದ ದಾವಾ ಆಸ್ತಿ ಕ್ರಮ ಸಂಃ3 ರಲ್ಲಿ ಮನೆ ಕಟ್ಟಿಕೊಂಡು ವಾಸವಿದ್ದಾರೆ ಎಂದರೆ ಸರಿ. ಪ್ರತಿವಾದಿಗೆ ತೊಂದರೆ ಕೊಡಲು ಸುಳ್ಳು ದಾವೆ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

**ಓ. ಹೇ. ಕೇ. ಸರಿ. ಇದೆ.**

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ**
**ನವಲಗುಂದ.**